(1)

**ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿ ರವರು**
**ನಿಯಮ 330ಎ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ**

ಹುಬ್ಬಳ್ಳಿಯ ಕೆ.ಎಲ್.ಇ ಇಂಜಿನಿಯರಿಂಗ್ ಕಾಲೇಜಿನಲ್ಲಿ 3 ವಿದ್ಯಾರ್ಥಿಗಳು ಪಾಕ್ ಪರ ಘೋಷಣೆ ಕೂಗಿದ ಅರೋಪದ ಮೇರೆಗೆ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಗೋಕುಲ್ ರಸ್ತೆ ಪೊಲೀಸ್ ಠಾಣೆಯಲ್ಲಿ ಮೊಕದ್ದಮ ಸಂಖ್ಯೆ : 10/2020 ಕಲಂ 124(ಎ), 153(ಎ)(ಬಿ) 154(ಬಿ) 505(ii) ಐಪಿಸಿ ರೆ/ವಿ 34 ಐಪಿಸಿ ರೀತ್ಯಾ ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ. ಕಾಶ್ಮೀರ ಮೂಲದ ಆರೋಪಿಗಳಾದ (1) ಬಾಸೀದ್ ಅಸೀಕ್ ಸೋಪಿ (2) ತಾಲೀಬ್ ಮಜೀದ್ ಮತ್ತು (3) ಅಮೀರ್ ಮೊಹಿದ್ದಿನ್ ವಾನಿ, ಸಾಮಾಜಿಕ ಜಾಲತಾಣದಲ್ಲಿ ಚಿತ್ರೀಕರಣವು ವ್ಯತಿರಿಕ್ತವಾಗಿ ಹಬ್ಬಿದ್ದು, ಸ್ಥಳೀಯ ಸಂಘ-ಸಂಸ್ಥೆಗಳು ಕಾಲೇಜಿನ ಆವರಣಕ್ಕೆ ಧಾವಿಸಿ ಪ್ರತಿಭಟನೆ ಕೈಗೊಂಡಿದ್ದು, ಸೂಕ್ತ ಸಮಯಕ್ಕೆ ಪೊಲೀಸ್ ಅಧಿಕಾರಿಗಳು ಕ್ರಮಕೈಗೊಂಡಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಮತ್ತು ವ್ಯತಿರಿಕ್ತವಾಗಿ ಹರಡದಂತೆ ಯಶಸ್ವಿಯಾಗಿ ಕಾರ್ಯನಿರ್ವಹಿಸಲಾಗಿದೆ. ಆರೋಪಿಗಳನ್ನು ದಿನಾಂಕ 15.2.2020ರಂದು ವಿಚಾರಣೆಗೆ ಒಳಪಡಿಸಲಾಯಿತು. ತದನಂತರ 16.2.2020ರ ರಾತ್ರಿ 8.45ಕ್ಕೆ ಆರೋಪಿಗಳನ್ನು ಬಂಧಿಸಲಾಯಿತು. ದಿನಾಂಕ 17.2.2020ರ ಬೆಳಗಿನ ಜಾವದಲ್ಲಿ ಮ್ಯಾಜಿಸ್ಟ್ರೇಟ್‌ರ ನಿವಾಸದಲ್ಲಿ ಹಾಜರುಪಡಿಸಿ ತದನಂತರ ಬೆಳಿಗ್ಗೆ 11.00 ಘಂಟೆಗೆ ನ್ಯಾಯಾಲಯದಲ್ಲಿ ಹಾಜರುಪಡಿಸಲಾಯಿತು. ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿರುತ್ತದೆ.

ಇಡೀ ಪ್ರಕರಣವು ಮೇಲ್ನೋಟಕ್ಕೆ ಮೃದು ಧೋರಣೆ ಮತ್ತು ಮಂದಗತಿಯಲ್ಲಿ ಕಾರ್ಯನಿರ್ವಹಿಸಲಾಗಿದೆಯೆಂದು ಸಾರ್ವಜನಿಕ ಅಭಿಪ್ರಾಯ ವ್ಯಕ್ತವಾಗಿದ್ದರೂ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಇಡೀ ಪ್ರಕರಣದ ಸತ್ಯಾಸತ್ಯತೆಯನ್ನು ಸ್ಪಷ್ಟವಾಗಿ ಪರಿಶೀಲಿಸಿ ಕಾನೂನಿನ ಚೌಕಟ್ಟಿನಲ್ಲಿ ಕಟ್ಟುನಿಟ್ಟಾದ ಕ್ರಮ ಕೈಗೊಂಡಿದ್ದು, ಆರೋಪ ಎಸಗಿರುವವರ ವಿರುದ್ಧ ಸೂಕ್ತ ಕ್ರಮಕೈಗೊಂಡು ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಕ್ರಮವಹಿಸಲಾಗಿರುತ್ತದೆ.

**ಹೆಚ್‌ಡಿ 12 ಎಸ್‌ಎಸ್‌ಟಿ 2020**

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು

(1)

**ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ರವರು**
**ನಿಯಮ 330ಎ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ**

ಹುಬ್ಬಳ್ಳಿಯ ಕೆ.ಎಲ್.ಇ ಇಂಜಿನಿಯರಿಂಗ್ ಕಾಲೇಜಿನಲ್ಲಿ 3 ವಿದ್ಯಾರ್ಥಿಗಳು ಪಾಕ್ ಪರ ಘೋಷಣೆ ಕೂಗಿದ ಅರೋಪದ ಮೇರೆಗೆ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಗೋಕುಲ್ ರಸ್ತೆ ಪೊಲೀಸ್ ಠಾಣೆಯಲ್ಲಿ ಮೊಕದ್ದೆಮ ಸಂಖ್ಯೆ : 10/2020 ಕಲಂ 124(ಎ), 153(ಎ)(ಬಿ) 154(ಬಿ) 505(ii) ಐಪಿಸಿ ರೆ/ವಿ 34 ಐಪಿಸಿ ರೀತ್ಯಾ ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ. ಕಾಶ್ಮೀರ ಮೂಲದ ಆರೋಪಿಗಳಾದ (1) ಬಾಸೀದ್ ಅಸೀಕ್ ಸೋಪಿ (2) ತಾಲೀಬ್ ಮಜೀದ್ ಮತ್ತು (3) ಅಮೀರ್ ಮೊಹಿದ್ದಿನ್ ವಾನಿ, ಸಾಮಾಜಿಕ ಜಾಲತಾಣದಲ್ಲಿ ಚಿತ್ರೀಕರಣವು ವ್ಯತಿರಿಕ್ತವಾಗಿ ಹಬ್ಬಿದ್ದು, ಸ್ಥಳೀಯ ಸಂಘ-ಸಂಸ್ಥೆಗಳು ಕಾಲೇಜಿನ ಆವರಣಕ್ಕೆ ಧಾವಿಸಿ ಪ್ರತಿಭಟನೆ ಕೈಗೊಂಡಿದ್ದು, ಸೂಕ್ತ ಸಮಯಕ್ಕೆ ಪೊಲೀಸ್ ಅಧಿಕಾರಿಗಳು ಕ್ರಮಕೈಗೊಂಡು ಯಾವುದೇ ಅಹಿತಕರ ಘಟನೆ ನಡೆಯದಂತೆ ಮತ್ತು ವ್ಯತಿರಿಕ್ತವಾಗಿ ಹರಡದಂತೆ ಯಶಸ್ವಿಯಾಗಿ ಕಾರ್ಯನಿರ್ವಹಿಸಿರುತ್ತಾರೆ. ಆರೋಪಿಗಳನ್ನು ದಿನಾಂಕ 15.2.2020ರಂದು ವಿಚಾರಣೆಗೆ ಒಳಪಡಿಸಲಾಯಿತು. ತದನಂತರ 16.2.2020ರ ರಾತ್ರಿ 8.45ಕ್ಕೆ ಆರೋಪಿಗಳನ್ನು ಬಂಧಿಸಲಾಯಿತು. ದಿನಾಂಕ 17.2.2020ರ ಬೆಳಗಿನ ಜಾವದಲ್ಲಿ ಮ್ಯಾಜಿಸ್ಟ್ರೇಟ್‌ರ ನಿವಾಸದಲ್ಲಿ ಹಾಜರುಪಡಿಸಿ ತದನಂತರ ಬೆಳಿಗ್ಗೆ 11.00 ಘಂಟೆಗೆ ನ್ಯಾಯಾಲಯದಲ್ಲಿ ಹಾಜರುಪಡಿಸಲಾಯಿತು. ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿರುತ್ತದೆ.

ಪೊಲೀಸ್ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಇಡೀ ಪ್ರಕರಣದ ಸತ್ಯಾಸತ್ಯತೆಯನ್ನು ಸ್ಪಷ್ಟವಾಗಿ ಪರಿಶೀಲಿಸಿ ಕಾನೂನಿನ ಚೌಕಟ್ಟಿನಲ್ಲಿ ಕಟ್ಟುನಿಟ್ಟಾದ ಕ್ರಮ ಕೈಗೊಂಡಿದ್ದು, ಆರೋಪ ಎಸಗಿರುವವರ ವಿರುದ್ಧ ಸೂಕ್ತ ಕ್ರಮಕೈಗೊಂಡು ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಕ್ರಮವಹಿಸಿರುತ್ತಾರೆ.

ದಕ್ಷಿಣ ಕನ್ನಡ ಜಿಲ್ಲೆ ಶ್ರೀರಾಮ ವಿದ್ಯಾಕೇಂದ್ರ, ಕಲ್ಲಡ್ಕ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಟ್ವಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ: 130/2019 ಕಲಂ 295(ಎ), 298 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿದ್ದು, ಸದರಿ ಪ್ರಕರಣವು ತನಿಖೆಯಲ್ಲಿರುತ್ತದೆ. ಪೊಲೀಸ್ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ಪ್ರಕರಣವನ್ನು ದಾಖಲು ಮಾಡಿ ಕ್ಷಿಪ್ರವಾಗಿ ತನಿಖೆಯನ್ನು ಕೈಗೊಂಡು, ಲಭ್ಯ ಸಾಕ್ಷಾಧಾರಗಳ ಮೇರೆಗೆ ಮತ್ತು ವಿಧಿ ವಿಜ್ಞಾನದ ವರದಿ ಒಳಗೊಂಡಂತೆ ತನಿಖೆಯನ್ನು ವೈಜ್ಞಾನಿಕವಾಗಿ ಕೈಗೊಂಡಿರುತ್ತಾರೆ.

**ಹೆಚ್‌ಡಿ 13 ಎಸ್‌ಎಸ್‌ಟಿ 2020**

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು